## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ**: 2019-20ನೇ ಸಾಲಿನ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ಯೋಜನೆಯಡಿಯಲ್ಲಿ ಒಳಾಂಗಣ ಕ್ರಿಡಾಂಗಣ ನಿರ್ಮಿಸಲು ಹುಣಸಗಿ ಪಟ್ಟಣದಲ್ಲಿ ಅರ್ಧ ಎಕರೆ (20 ಗುಂಟೆ) ಜಮೀನನ್ನು ನೀಡುವ ಕುರಿತು.

***

**ಓದಲಾಗಿದೆ:**-1. ವ್ಯವಸ್ಥಾಪಕ ನಿರ್ದೇಶಕರು, ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತ ಇವರ ಪತ್ರ ಸಂಖ್ಯೆ: ಕೃಭಾಜನಿನಿ/ಆಡಳಿತ/ಸಿ-2/16/2020-21/40 ದಿನಾಂಕ:05.04.2021.

2. ವ್ಯವಸ್ಥಾಪಕ ನಿರ್ದೇಶಕರು, ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತ ಇವರ ಪತ್ರ ಸಂಖ್ಯೆ: ಕೃಭಾಜನಿನಿ/ ಆಡಳಿತ/ಸಿ-2/2020-21/1093 ದಿನಾಂಕ:30.07.2021.

**ಪ್ರಸ್ತಾವನೆ:-**

ಮೇಲೆ ಓದಲಾದ (1)ರ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತ ರವರು ಮುಖ್ಯ ಇಂಜಿನಿಯರ್, ಕಾರ್ಯಾಚರಣೆ ಮತ್ತು ನಿರ್ವಹಣೆ ವಲಯ, ನಾರಾಯಣಪುರ ಇವರು ತಮ್ಮ ಪತ್ರ ದಿನಾಂಕ:03/02/2021ರಲ್ಲಿ ಹುಣಸಗಿ ಪಟ್ಟಣದಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಹತ್ತಿರವಿರುವ ನಿಗಮದ ಸ್ವಾಧೀನದಲ್ಲಿರುವ ಸರ್ವೆ ಸಂ.211 ರ ಖುಲ್ಲಾ ಜಾಗದಲ್ಲಿ 20 ಗುಂಟೆ ಜಾಗವನ್ನು ಒಳಾಂಗಣ ಕ್ರೀಡಾಂಗಣ ನಿರ್ಮಾಣಕ್ಕಾಗಿ ಹಿರಿಯ ಉಪ ನೊಂದಣಾಧಿಕಾರಿ, ಹುಣಸಗಿ ಇವರು ನಿಗಧಿಪಡಿಸಿರುವ ಮಾರುಕಟ್ಟೆ ಬೆಲೆಯ ಆಧಾರದಲ್ಲಿ ಲೋಕೋಪಯೋಗಿ, ಬಂದರು ಹಾಗೂ ಜಲ ಸಾರಿಗೆ ಇಲಾಖೆಗೆ ಹಸ್ತಾಂತರಿಸಲು ಪ್ರಸ್ತಾವನೆ ಸಲ್ಲಿಸಿರುವುದಾಗಿ ತಿಳಿಸಿರುತ್ತಾರೆ.

ಜಿಲ್ಲಾಧಿಕಾರಿಗಳು, ಯಾದಗಿರಿ ಜಿಲ್ಲೆ ಇವರು ತಮ್ಮ ದಿನಾಂಕ:10/02/2021ರ ಪತ್ರದಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯಿಂದ 2019-20ನೇ ಸಾಲಿಗೆ ಯಾದಗಿರಿ ಜಿಲ್ಲೆಯ ಹುಣಸಗಿ ಪಟ್ಟಣದಲ್ಲಿ ಒಳಾಂಗಣ ಕ್ರೀಡಾಂಗಣ ನಿರ್ಮಿಸಲು ರೂ.174.02 ಲಕ್ಷಗಳಿಗೆ ಅನುಮೋದನೆ ಆಗಿರುತ್ತದೆ ಎಂದು ಹಾಗೂ ಸದರಿ ಕಾಮಗಾರಿಗೆ ಹುಣಸಗಿ ಪಟ್ಟಣದಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಹತ್ತಿರವಿರುವ ಕೃಷ್ಣಾ ಭಾಗ್ಯ ಜಲ ನಿಗಮಕ್ಕೆ ಸೇರಿದ ಸರ್ವೆ ನಂ.211 ರಲ್ಲಿನ 2.00 ಎಕರೆ ಜಮೀನಿನಲ್ಲಿ 20 ಗುಂಟೆ ಜಮೀನನ್ನು ಸಾರ್ವಜನಿಕ ಹಿತದೃಷ್ಟಿಯಿಂದ ಕ್ರೀಡಾ ಇಲಾಖೆಗೆ ಒಳಾಂಗಣ ಕ್ರೀಡಾಂಗಣ ನಿರ್ಮಿಸಲು ಜಮೀನು ಮಂಜೂರು ಮಾಡಲು ಕೋರಿರುತ್ತಾರೆಂದು ವ್ಯವಸ್ಥಾಪಕ ನಿರ್ದೇಶಕರು, ಕೃಷ್ಣಾ ಭಾಗ್ಯ ಜಲ ನಿಗಮ ರವರು ತಮ್ಮ ಪತ್ರದಲ್ಲಿ ವರದಿ ಮಾಡಿರುತ್ತಾರೆ.

ಮೇಲೆ ಓದಲಾದ (2) ರ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತ ರವರ ಪ್ರಸ್ತಾವನೆಯನ್ನು ದಿನಾಂಕ:22.07.2021ರಂದು ಜರುಗಿದ 130ನೇ ಮಂಡಳಿ ಸಭೆಯಲ್ಲಿ ಮಂಡಿಸಿದ್ದು, ಮಂಡಳಿಯು ಸದರಿ ವಿಷಯದ ಕುರಿತು ಅವಲೋಕಿಸಿ, ಚರ್ಚಿಸಿದಂತೆ ಹುಣಸಗಿ ಪಟ್ಟಣದ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಹತ್ತಿರವಿರುವ ಕೃಷ್ಣಾ ಭಾಗ್ಯ ಜಲ ನಿಗಮದ ವ್ಯಾಪ್ತಿಗೆ ಸೇರಿದ ಸರ್ವೆ ನಂ. 211 ರಲ್ಲಿನ 2.00 ಎಕರೆ ಜಮೀನಿನಲ್ಲಿ 20 ಗುಂಟೆ ಜಾಗಕ್ಕೆ ರೂ.2.50 ಲಕ್ಷಗಳಾಗುವುದೆಂದು ತಿಳಿಸಿರುವುದರಿಂದ, ಇದರ ಎರಡು ಪಟ್ಟು ಅಂದರೆ ರೂ.5.00 ಲಕ್ಷಗಳನ್ನು ಮಾರುಕಟ್ಟೆ ಬೆಲೆ ಎಂದು ಪರಿಗಣಿಸಿ ಸಾರ್ವಜನಿಕ ಹಿತದೃಷ್ಟಿಯಿಂದ ನಿಗಮದ ಸ್ವಾಧೀನದಲ್ಲಿ ಇರುವ ಖುಲ್ಲಾ 20 ಗುಂಟೆ ಜಾಗವನ್ನು ಒಳಾಂಗಣ ಕ್ರೀಡಾಂಗಣ ನಿರ್ಮಿಸಲು ಕ್ರೀಡಾ ಇಲಾಖೆಗೆ ಒಂದಾವರ್ತಿ ಹಸ್ತಾಂತರಿಸಲು ಸರ್ಕಾರದ ಅನುಮೋದನೆಯನ್ನು ಪಡೆಯಲು ಮಂಡಳಿ ಸಭೆಯು ಅನುಮೋದಿಸಿರುತ್ತದೆ ಎಂದು ವರದಿ ಮಾಡಿರುತ್ತಾರೆ.

ಮುಂದುವರೆದು, ವ್ಯವಸ್ಥಾಪಕ ನಿರ್ದೇಶಕರು, ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತ ರವರು ಜಿಲ್ಲಾಧಿಕಾರಿಗಳು, ಯಾದಗಿರಿ ಜಿಲ್ಲೆ ಇವರು ಕೋರಿರುವಂತೆ ಹಾಗೂ ನಿಗಮದ ನಿರ್ದೇಶಕರ ಮಂಡಳಿ ಶಿಫಾರಸ್ಸಿನ ಮೇರೆಗೆ ಪ್ರಸ್ತಾವನೆಗೆ ಆಡಳಿತಾತ್ಮಕ ಅನುಮೋದನೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯಲ್ಲಿನ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಇ-ಸಂಖ್ಯೆ:ಜಸಂಇ 95 ಕೆಬಿಎನ್ 2021, ಬೆಂಗಳೂರು, ದಿನಾಂಕ:11/10/2021**

ಹುಣಸಗಿ ಪಟ್ಟಣದಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಹತ್ತಿರವಿರುವ ಕೃಷ್ಣಾ ಭಾಗ್ಯ ಜಲ ನಿಗಮಕ್ಕೆ ಸೇರಿದ ಸರ್ವೆ ನಂ. 211 ರಲ್ಲಿನ 2.00 ಎಕರೆ ಜಮೀನಿನಲ್ಲಿ 20 ಗುಂಟೆ ಜಾಗದ ಮೌಲ್ಯ ರೂ.2.50 ಲಕ್ಷಗಳಾಗಲಿದ್ದು, ಇದರ ಎರಡು ಪಟ್ಟು ಅಂದರೆ ರೂ.5.00 ಲಕ್ಷಗಳನ್ನು ಮಾರುಕಟ್ಟೆ ಬೆಲೆ ಎಂದು ಪರಿಗಣಿಸಿ ಸಾರ್ವಜನಿಕ ಹಿತದೃಷ್ಠಿಯಿಂದ ರೂ.5.00 ಲಕ್ಷ (ರೂಪಾಯಿ ಐದು ಲಕ್ಷ ಮಾತ್ರ) ಮೊತ್ತದ 20 ಗುಂಟೆ ಜಾಗವನ್ನು ಒಳಾಂಗಣ ಕ್ರೀಡಾಂಗಣ ನಿರ್ಮಿಸಲು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಗೆ ಒಂದಾವರ್ತಿ ಹಸ್ತಾಂತರಿಸಿ ಆದೇಶಿಸಿದೆ.

ಈ ಆದೇಶವನ್ನು ಕಂದಾಯ ಇಲಾಖೆಯ ಆದೇಶ ಸಂ. ಆರ್.ಡಿ. 32 ಎಲ್‌ಜಿಪಿ 2019 ದಿನಾಂಕ:01.02.2021 ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

11/10/2021

(ರವೀಂದ್ರ ಕೊಂಡ)
ಸರ್ಕಾರದ ಅಧೀನ ಕಾರ್ಯದರ್ಶಿ (ತಾಂತ್ರಿಕ-5)
ಜಲ ಸಂಪನ್ಮೂಲ ಇಲಾಖೆ

1. ಮಹಾಲೇಖಪಾಲರು (ಲೆಕ್ಕಪತ್ರ ಮತ್ತು ಆಡಿಟ್), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಜಲ ಸಂಪನ್ಮೂಲ ಇಲಾಖೆ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
4. ಸರ್ಕಾರದ ಕಾರ್ಯದರ್ಶಿಗಳು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
5. ಸರ್ಕಾರದ ಕಾರ್ಯದರ್ಶಿಗಳು, ಜಲ ಸಂಪನ್ಮೂಲ ಇಲಾಖೆ, ವಿಕಾಸಸೌಧ, ಬೆಂಗಳೂರು.
6. ವ್ಯವಸ್ಥಾಪಕ ನಿರ್ದೇಶಕರು, ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತ, ಬೆಂಗಳೂರು
7. ಜಿಲ್ಲಾಧಿಕಾರಿಗಳು, ಯಾದಗಿರಿ ಜಿಲ್ಲೆ, ಯಾದಗಿರಿ.
8. ಹೆಚ್ಚುವರಿ ಕಾರ್ಯದರ್ಶಿಗಳು, ಜಲ ಸಂಪನ್ಮೂಲ ಇಲಾಖೆ, ವಿಕಾಸಸೌಧ, ಬೆಂಗಳೂರು
9. ಮುಖ್ಯ ಇಂಜಿನಿಯರ್, ಜಲ ಸಂಪನ್ಮೂಲ ಅಭಿವೃದ್ಧಿ ಸಂಸ್ಥೆ, ಬೆಂಗಳೂರು.
10. ಮುಖ್ಯ ಇಂಜಿನಿಯರ್, ಕಾರ್ಯಾಚರಣೆ ಮತ್ತು ನಿರ್ವಹಣೆ ವಲಯ, ನಾರಾಯಣಪುರ
11. ಶಾಖಾ ರಕ್ಷಕ ಕಡತ / ಹೆಚ್ಚುವರಿ ಪ್ರತಿಗಳು.